## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಫೀಲ್ಡ್ ಮಾರ್ಷಲ್ ಕಾರ್ಯಪ್ಪ ನವರ ಜನ್ಮ ದಿನಾಚರಣೆ ಕುರಿತು.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರದ ಸಂಖ್ಯೆ: ಡಿಕೆಸಿ/400021/01/2019-20, ದಿ:09-12-2019

ಪ್ರಸ್ತಾವನೆ:

ಫೀಲ್ಡ್ ಮಾರ್ಷಲ್ ಕಾರ್ಯಪ್ಪ ನವರ 120ನೇ ಜನ್ಮ ದಿನಾಚರಣೆ ಆಚರಿಸಲು ಪ್ರತಿ ವರ್ಷದಂತೆ, ಈ ವರ್ಷವೂ ಇಲಾಖೆಯ ವತಿಯಿಂದ ದಿ:28-01-2019ರಂದು ಮಡಿಕೇರಿಯಲ್ಲಿ ಆಚರಿಸಲು ರೂ.10.00 ಲಕ್ಷಗಳನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ: 2205-00-102-4-31-059ರಡಿ ಜಯಂತಿಗಳ ಆಚರಣೆಗೆ ಒದಗಿಸಿರುವ ಮೊತ್ತದಿಂದ ಭರಿಸಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 11 ಕಸಧ 2020, ಬೆಂಗಳೂರು, ದಿನಾಂಕ:02-03-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಫೀಲ್ಡ್ ಮಾರ್ಷಲ್ ಕಾರ್ಯಪ್ಪ ನವರ 120ನೇ ಜನ್ಮ ದಿನಾಚರಣೆ ಆಚರಿಸಲು ಪ್ರತಿ ವರ್ಷದಂತೆ, ಈ ವರ್ಷವೂ ಇಲಾಖೆಯ ವತಿಯಿಂದ ದಿ:28-01-2019ರಂದು ಮಡಿಕೇರಿಯಲ್ಲಿ ಆಚರಿಸಲು ರೂ.10.00 ಲಕ್ಷ (ರೂಪಾಯಿ ಹತ್ತು ಲಕ್ಷ ಮಾತ್ರ) ಗಳನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

1) ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಣ ಮಂಜೂರು ಮಾಡಿದ್ದು, ಅದೇ ಉದ್ದೇಶಕ್ಕೆ ಬಳಸತಕ್ಕದ್ದು.

2) ಮಂಜೂರು ಮಾಡಿದ ಹಣ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಹಣಬಳಕೆ ಪ್ರಮಾಣಪತ್ರವನ್ನು ಪಡೆದು ಸಲ್ಲಿಸುವುದು.

2) ಈ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059 ರಡಿಯಲ್ಲಿ ಭರಿಸತಕ್ಕದ್ದು.

3) ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2020, ದಿನಾಂಕ: 13-01-2020ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Malathi PS 2/3/20

(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
(ಸಂಸ್ಕೃತಿ ಶಾಖೆ)

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಸಂಬಂಧಪಟ್ಟವರಿಗೆ (ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಮುಖಾಂತರ)
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.